# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103, ☎ : 0816-2255650, 2273511 ಫ್ಯಾಕ್ಸ್ : 0816- 2270719


## ಸೂಚನಾ ಫಲಕಕ್ಕೆ ಕಡ್ಡಾಯವಾಗಿ

1. ಕೋವಿಡ್-19 ರ ಪ್ರಯುಕ್ತ, ವಿದ್ಯಾರ್ಥಿಗಳು ಪರೀಕ್ಷೆಗೆ ಆಗಮಿಸುವಾಗ ಕಡ್ಡಾಯವಾಗಿ ಮಾಸ್ಕ್ ಹಾಗೂ ಸ್ಯಾನಿಟೈಸರ್ ಬಳಸುವುದು ಮತ್ತು ಸಾಮಾಜಿಕ ಅಂತರ ಕಾಪಾಡಿಕೊಳ್ಳುವುದು ಹಾಗೂ ಶುದ್ಧ ಕುಡಿಯುವ ನೀರನ್ನು ತಮ್ಮ ಮನೆಯಿಂದಲೇ ತರುವುದು.
2. ವಿದ್ಯಾರ್ಥಿಗಳು ತಮ್ಮ ಉತ್ತರ ಪತ್ರಿಕೆಯಲ್ಲಿ ಯಾವುದೇ ರೀತಿಯ ಹೆಸರು, ಗುರುತು, ಚಿಹ್ನೆ ಅಥವಾ ಸಂಕೇತಗಳನ್ನು ಬರೆಯಬಾರದು. ಬರೆದಿರುವುದು ಕಂಡುಬಂದಲ್ಲಿ ಅಂತಹ ಉತ್ತರ ಪತ್ರಿಕೆಗಳನ್ನು ಪರೀಕ್ಷಾ ಅಕ್ರಮ ಚಟುವಟಿಕೆಯೆಂದು ಪರಿಗಣಿಸಿ ಅದನ್ನು ಮೌಲ್ಯಮಾಪನ ಕಾರ್ಯದಿಂದ ಹೊರಗಿಡಲಾಗುವುದು.
3. ವಿದ್ಯಾರ್ಥಿಗಳು ಪರೀಕ್ಷಾ ಕೊಠಡಿಯೊಳಗೆ ಮೊಬೈಲ್‌ಗಳನ್ನು ತರುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
4. ವಿದ್ಯಾರ್ಥಿಗಳು ಪರೀಕ್ಷಾ ಅವಧಿ ಮುಗಿಯುವವರೆಗೆ ಪ್ರಶ್ನೆ ಪತ್ರಿಕೆಗಳನ್ನು ಕೊಠಡಿಯಿಂದ ಹೊರಗಡೆ ತೆಗೆದುಕೊಂಡು ಹೋಗುವಂತಿಲ್ಲ.

ಆದೇಶದ ಮೇರೆಗೆ

ಕುಲಸಚಿವರು (ಪರೀಕ್ಷಾಂಗ)

ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ,ತುಮಕೂರು-572 103 ☎:0816 - 2255650,2273511 ಫ್ಯಾಕ್ಸ್ : 0816-2270719

ಸಂಖ್ಯೆ:ಮಬಿ: ಪ.ಬಿ:ಬಿ.ಬಿ.-03:2021-22:

ದಿನಾಂಕ: 04.09.2021

# ಸುತ್ತೋಲೆ

ವಿಷಯ: ಪರೀಕ್ಷಾ ಮುಂಜಾಗ್ರತ ಕ್ರಮ ವಹಿಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್– 19 ರ ಪ್ರಯುಕ್ತ, ಸೆಪ್ಟೆಂಬರ್/ಅಕ್ಟೋಬರ್ 2021 ರಲ್ಲಿ ನಡೆಯಲಿರುವ ವಿವಿಧ ಸ್ನಾತಕ ಮತ್ತು ಸ್ನಾತಕ ದೈಹಿಕ ಶಿಕ್ಷಣ ಪದವಿ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಲು ಈ ಕೆಳಕಂಡ ಪರೀಕ್ಷಾ ಮುಂಜಾಗ್ರತ ಕ್ರಮಗಳನ್ನು ವಹಿಸಲು ತಮಗೆ ಈ ಮೂಲಕ ಸೂಚಿಸಲಾಗಿದೆ.

- ಸೈದ್ಧಾಂತಿಕ ಪರೀಕ್ಷೆಗಳು ನಡೆಯುವ ಸೂಕ್ತ ವಿವರಗಳೊಂದಿಗೆ ತಮ್ಮ ತಾಲ್ಲೂಕಿನ ಕೋವಿಡ್–19 ಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ ಮತ್ತು ವೈದ್ಯಾಧಿಕಾರಿಗಳಿಗೆ ಮಾಹಿತಿಯನ್ನು ನೀಡಿ ಅಗತ್ಯ ಮುಂಜಾಗ್ರತ ಕ್ರಮ ವಹಿಸಿ ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಈ ಮೂಲಕ ಕೋರಲಾಗಿದೆ.
- ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ ಪರೀಕ್ಷಾ ಕೇಂದ್ರಗಳಲ್ಲಿ ಆಗಮಿಸುವ ಮತ್ತು ನಿರ್ಗಮಿಸುವ ದ್ವಾರಗಳಲ್ಲಿಯೇ ಕಡ್ಡಾಯವಾಗಿ ವಿದ್ಯಾರ್ಥಿಗಳಿಗೆ ಮತ್ತು ಸಿಬ್ಬಂದಿಗಳಿಗೆ ಥರ್ಮಲ್ ಸ್ಕ್ಯಾನಿಂಗ್ ಮಾಡುವುದು. ಆದ್ದರಿಂದ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಒಂದು ಗಂಟೆ ಮುಂಚಿತವಾಗಿಯೇ ಪರೀಕ್ಷಾ ಕೇಂದ್ರದಲ್ಲಿ ಹಾಜರಿರುವಂತೆ ಸೂಚಿಸುವುದು.
- ಪರೀಕ್ಷಾ ಕೇಂದ್ರಗಳಲ್ಲಿ ಆಗಮಿಸುವ ಮತ್ತು ನಿರ್ಗಮಿಸುವ ಸಮಯದಲ್ಲಿ ಜನಸಂದಣಿಯಾಗದಂತೆ ಕ್ರಮವಹಿಸುವುದು.
- ವಿದ್ಯಾರ್ಥಿಗಳು ಕೋವಿಡ್–19 ಪರೀಕ್ಷೆ ಮಾಡಿಸಿ ನೆಗೆಟಿವ್ ವರದಿ ಇದ್ದರೆ ಒಳ್ಳೆಯದು.
- ಸಾಧಾರಣಕ್ಕಿಂತ ಹೆಚ್ಚು ದೇಹದ ಉಷ್ಣಾಂಶ, ಜ್ವರ ಮತ್ತು ಕೆಮ್ಮು ಇರುವಂತಹ ವಿದ್ಯಾರ್ಥಿಗೆ ಪ್ರತ್ಯೇಕ ಕೊಠಡಿಯಲ್ಲಿ ಪರೀಕ್ಷೆ ಬರೆಯಲು ವ್ಯವಸ್ಥೆ ಮಾಡುವುದು.
- ಆರೋಗ್ಯದ ದೃಷ್ಟಿಯಿಂದ ವಿದ್ಯಾರ್ಥಿಗಳು ನೀರಿನ ಬಾಟಲ್‌ನ್ನು ಮನೆಯಿಂದ ತರುವುದು.
- ವಿದ್ಯಾರ್ಥಿಗಳು ಮತ್ತು ಪರೀಕ್ಷಾ ಸಿಬ್ಬಂದಿ ಸ್ವಚ್ಛವಾದ ಮಾಸ್ಕನ್ನು ಧರಿಸುವುದು (ಮೂಗು ಮತ್ತು ಬಾಯಿ ಮುಚ್ಚುವಂತಿರಬೇಕು) ಹಾಗೂ ಒಂದು ಸ್ವಚ್ಛವಾದ ಕರವಸ್ತ್ರವನ್ನು ತರುವುದು. ಒಂದು ವೇಳೆ ಮಾಸ್ಕನ್ನು ಧರಿಸದಿದ್ದಲ್ಲಿ ಕಾಲೇಜಿನಿಂದ ವಿದ್ಯಾರ್ಥಿಗಳಿಗೆ ಮಾಸ್ಕಗಳನ್ನು ವಿತರಿಸುವುದು.
- ಪ್ರವೇಶ ದ್ವಾರ, ಕೊಠಡಿಗಳಿಗೆ ಕಡ್ಡಾಯವಾಗಿ ಸ್ಯಾನಿಟೈಸರ್ (ಡೆಸ್ಕ್ & ಚೇರ್ ಸೇರಿದಂತೆ) ಮತ್ತು ಶೌಚಾಲಯಗಳು ಸ್ವಚ್ಛವಾಗಿರಿಸಿ ಸ್ಯಾನಿಟೈಸರ್ ಮಾಡುವುದು
- ವಿದ್ಯಾರ್ಥಿಗಳಿಗೆ ಪರೀಕ್ಷಾ ಸಮಯದಲ್ಲಿ ಹ್ಯಾಂಡ್ ಸ್ಯಾನಿಟೈಸರ್ ಉಪಯೋಗಿಸುವುದು.
- ಸಿಬ್ಬಂದಿಗಳಿಗೆ ಹ್ಯಾಂಡ್ ಸ್ಯಾನಿಟೈಸರ್ ಮತ್ತು ಗ್ಲೌಸ್ ಉಪಯೋಗಿಸಲು ಸೂಚಿಸುವುದು.

( 2 ನೇ ಪುಟಕ್ಕೆ)

- ಪರೀಕ್ಷಾ ಕಾರ್ಯದಲ್ಲಿ ಭಾಗವಹಿಸುವ ಎಲ್ಲಾ ಅಧಿಕಾರಿಗಳು / ಸಿಬ್ಬಂದಿಗಳು ಆರೋಗ್ಯ ಸೇತು ಆ್ಯಪ್‌ನ್ನು ಕಡ್ಡಾಯವಾಗಿ ಡೌನ್‌ಲೋಡ್ ಮಾಡಿಕೊಳ್ಳುವುದು ಮತ್ತು ಯು.ಜಿ.ಸಿ., ಕರ್ನಾಟಕ ಸರ್ಕಾರ ಮತ್ತು ವಿಶ್ವವಿದ್ಯಾನಿಲಯದ ಕೋವಿಡ್–19 ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳುವುದು ತಪ್ಪಿದಲ್ಲಿ ವಿಶ್ವವಿದ್ಯಾನಿಲಯದ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.
- ಕೋವಿಡ್–19 ನ ಮುಂಜಾಗ್ರತ ಕ್ರಮಗಳನ್ನು (ಮಾಸ್ಕ್, ಸ್ಯಾನಿಟೈಸರ್, ಸಾಮಾಜಿಕ ಅಂತರ, ಥರ್ಮಲ್ ಸ್ಕ್ಯಾನಿಂಗ್, ನೀರಿನ ವ್ಯವಸ್ಥೆ) ಮಾಹಿತಿಗಾಗಿ ಸೂಚನಫಲಕಗಳಲ್ಲಿ ಪ್ರಕಟಿಸುವುದು.
- ಪರೀಕ್ಷಾ ಕೇಂದ್ರಗಳಿಗೆ ಜೋಡಣೆ ಮಾಡಲಾದ ಕಾಲೇಜಿನವರು ತಮ್ಮ ವಿದ್ಯಾರ್ಥಿಗಳ ಆರೋಗ್ಯ ಮತ್ತು ಪರೀಕ್ಷಾ ಮುಂಜಾಗ್ರತ ಕ್ರಮಗಳನ್ನು ವಹಿಸಿ ಪರೀಕ್ಷಾ ಕೇಂದ್ರದವರಿಗೆ ಸಂಪೂರ್ಣ ಸಹಕಾರ ನೀಡಲು ಸೂಚಿಸಲಾಗಿದೆ.

ಆದೇಶದ ಮೇರೆಗೆ,

ಕುಲಸಚಿವರು (ಪರೀಕ್ಷಾಂಗ)

ಗೆ,

1. ಪ್ರಾಂಶುಪಾಲರು, ಘಟಕ / ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪರೀಕ್ಷಾ ಮುಖ್ಯ ಅಧೀಕ್ಷಕರುಗಳು / ಹೆಚ್ಚುವರಿ ಪರೀಕ್ಷಾ ಮುಖ್ಯ ಅಧೀಕ್ಷಕರುಗಳು.

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ವಿಶೇಷಾಧಿಕಾರಿಗಳು, ಮಾನ್ಯ ಕುಲಪತಿಯವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
5. ಕಛೇರಿ ಪ್ರತಿ.